# **ಕರ್ನಾಟಕ ಸರ್ಕಾರ**

ಸಂಖ್ಯೆ:ಕಪಂರಾಆ/ಅಭಿವೃದ್ಧಿ/14/2021.

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳಕಟ್ಟಡ,
ಬೆಂಗಳೂರು, ದಿನಾಂಕ:01.02.2021.

## **ಸುತ್ತೋಲೆ**

**ವಿಷಯ:** ರಾಜ್ಯದ ಗ್ರಾಮ ಪಂಚಾಯಿತಿಗಳು ಭೂಮಿ ಮತ್ತು ಕಟ್ಟಡಗಳ ಮೇಲೆ ಸಂಗ್ರಹಿಸಿರುವ ತೆರಿಗೆ ಮೊತ್ತದ ಮೇಲೆ ವಿಧಿಸುವ ಗ್ರಂಥಾಲಯ ಉಪಕರದ ಮೊತ್ತವನ್ನು ಗ್ರಾಮ ಪಂಚಾಯಿತಿ ಗ್ರಂಥಾಲಯಗಳ ಅಭಿವೃದ್ಧಿ ಮತ್ತು ಇತರೆ ಅಗತ್ಯಗಳಿಗೆ ಬಳಸುವ ಕುರಿತು ಹಾಗೂ ಗ್ರಂಥಾಲಯದಲ್ಲಿ ಇಡಬೇಕಾದ ಪುಸ್ತಕಗಳ ಕುರಿತು.

**ಉಲ್ಲೇಖ:**
1) ಸರ್ಕಾರದ ಆದೇಶ ಸಂಖ್ಯೆ: ಇಡಿ64ಎಲ್‌ಐವಿ2015, ದಿನಾಂಕ: 26.02.2019.
2) ದಿನಾಂಕ: 05.08.2019ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡವಳಿಗಳು.
3) ಸರ್ಕಾರದ ಸುತ್ತೋಲೆ ಸಂಖ್ಯೆ:ಗ್ರಾಅಪಂ84ಗ್ರಾಪಂಅ2020, ದಿನಾಂಕ: 21.01.2020.

***

The Karnataka Public Libraries Act 1965ರ ಪ್ರಕರಣ 30ರಡಿ ಸ್ಥಳೀಯ ಪ್ರಾಧಿಕಾರಗಳು ಭೂಮಿ ಮತ್ತು ಕಟ್ಟಡಗಳ ಮೇಲೆ ವಿಧಿಸುವ ತೆರಿಗೆಯ ಮೇಲೆ ಪ್ರತಿ ಒಂದು ರೂಪಾಯಿಗೆ ಕನಿಷ್ಠ 3 ಪೈಸೆಯಿಂದ ಗರಿಷ್ಠ 6 ಪೈಸೆವರೆಗೆ ಗ್ರಂಥಾಲಯ ಉಪಕರ ವಿಧಿಸಿ, ವಸೂಲಿ ಮಾಡಲು ಅವಕಾಶ ಕಲ್ಪಿಸಲಾಗಿದೆ. ಪ್ರಕರಣ 30(4) ರಡಿ ಸ್ಥಳೀಯ ಪ್ರಾಧಿಕಾರಗಳು ಈ ರೀತಿ ವಸೂಲಿ ಮಾಡಿದ ಗ್ರಂಥಾಲಯ ಉಪಕರದ ಶೇಕಡ 10%ರಷ್ಟನ್ನು ಗ್ರಾಮ ಪಂಚಾಯಿತಿಗಳು ಉಪಯೋಗಿಸ ಬಹುದಾಗಿದೆ.

ಉಲ್ಲೇಖ(1)ರ ಸರ್ಕಾರದ ಆದೇಶದಲ್ಲಿ ಗ್ರಾಮ ಪಂಚಾಯಿತಿ ಗ್ರಂಥಾಲಯಗಳ ನಿರ್ವಹಣೆಯನ್ನು ಸಾರ್ವಜನಿಕ ಗ್ರಂಥಾಲಯ ಇಲಾಖೆಯಿಂದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯಿತಿ ರಾಜ್ ಇಲಾಖೆಯ ಮೂಲಕ ಗ್ರಾಮ ಪಂಚಾಯಿತಿಗಳಿಗೆ ವರ್ಗಾಯಿಸಿ ಆದೇಶಿಸಲಾಗಿದೆ. ಸದರಿ ಆದೇಶದಲ್ಲಿ ಸಾರ್ವಜನಿಕ ಗ್ರಂಥಾಲಯ ಇಲಾಖೆಯ ಅಧೀನದಲ್ಲಿರುವ ಗ್ರಾಮ ಪಂಚಾಯಿತಿ ಗ್ರಂಥಾಲಯಗಳ ಸಂಪೂರ್ಣ ನಿರ್ವಹಣೆಯನ್ನು ದಿನಾಂಕ:01.03.2019 ರಿಂದ ಜಾರಿಗೆ ಬರುವಂತೆ ಗ್ರಾಮ ಪಂಚಾಯಿತಿಗಳಿಗೆ ವರ್ಗಾಯಿಸಲಾಗಿರುತ್ತದೆ. ಗ್ರಾಮ ಪಂಚಾಯಿತಿಗಳು ವಸೂಲಿ ಮಾಡುವ ಗ್ರಂಥಾಲಯ ಉಪಕರವನ್ನು ಗ್ರಾಮ ಪಂಚಾಯಿತಿ ಗ್ರಂಥಾಲಯಗಳಿಗೆ ಬಳಸಬೇಕೆಂದು ಶಿಕ್ಷಣ ಇಲಾಖೆಯು ತಿಳಿಸಿರುವುದರಿಂದ ಈ ಕುರಿತು ಉಲ್ಲೇಖ (2) ರ ಸಭೆಯಲ್ಲಿ ಚರ್ಚಿಸಿ ನಿರ್ಣಯಿಸಲಾಗಿದೆ. ಈ ಹಿನ್ನಲೆಯಲ್ಲಿ ಉಲ್ಲೇಖ (3)ರ ಸುತ್ತೋಲೆಯಲ್ಲಿ ಗ್ರಾಮ ಪಂಚಾಯಿತಿಗಳು ವಸೂಲಿ ಮಾಡುವ ಗ್ರಂಥಾಲಯ ಉಪಕರವನ್ನು ಪ್ರತ್ಯೇಕ ಖಾತೆ ತೆರೆದು ಸದರಿ ಖಾತೆಗೆ ಜಮಾ ಮಾಡಿ ಗ್ರಂಥಾಲಯ ನಿರ್ವಹಣೆಗಾಗಿ ಗ್ರಾಮ ಪಂಚಾಯಿತಿಗಳು ಉಪಯೋಗಿಸುವಂತೆ ತಿಳಿಸಿದೆ.

ಈ ಮೇಲೆ ವಿವರಿಸಿರುವಂತೆ ರಾಜ್ಯದ ಗ್ರಾಮ ಪಂಚಾಯಿತಿಗಳು ಸಂಗ್ರಹಿಸಲಾದ ಗ್ರಂಥಾಲಯ ಉಪಕರವನ್ನು ಗ್ರಂಥಾಲಯ ಅಭಿವೃದ್ಧಿ ಜೊತೆಗೆ ಈ ಕೆಳಗಿನ ಉದ್ದೇಶಗಳಿಗೂ ಸಹ ಬಳಸಲು ಸೂಚಿಸಿದೆ.

1. ಗ್ರಾಮ ಪಂಚಾಯಿತಿಗಳಲ್ಲಿ ನೋಂದಾಯಿಸುವ ಸದಸ್ಯರ ಸದಸ್ಯತ್ವ ಅರ್ಜಿ ನಮೂನೆ, ಸದಸ್ಯತ್ವ ಕಾರ್ಡ್ ಮುದ್ರಿಸಲು ಬಳಸುವುದು.
2. ಗ್ರಾಮ ಪಂಚಾಯಿತಿ ಗ್ರಂಥಾಲಯಗಳಲ್ಲಿ ಅಗತ್ಯವಿರುವ ವಹಿಗಳನ್ನು ಖರೀದಿಸಲು ಹಾಗೂ ನಿರ್ವಹಿಸಲು ಬಳಸುವುದು.
3. ಗ್ರಾಮ ಪಂಚಾಯಿತಿ ಗ್ರಂಥಾಲಯ ನಿರ್ವಹಣೆಗೆ ಅಗತ್ಯವಿರುವ ಲೇಖನ ಸಾಮಗ್ರಿಗಳನ್ನು ಖರೀದಿಸಲು ಬಳಸುವುದು.
4. ಗ್ರಾಮ ಪಂಚಾಯಿತಿಯಲ್ಲಿ ಕುಡಿಯುವ ನೀರಿನ ವ್ಯವಸ್ಥೆಗೆ ಬಳಸುವುದು.
5. ಗ್ರಾಮ ಪಂಚಾಯಿತಿ ಗ್ರಂಥಾಲಯದ ನೈರ್ಮಲ್ಯ ಕಾರ್ಯಕ್ಕೆ ಹಾಗೂ ಸ್ಯಾನಿಟೈಜರ್ ವ್ಯವಸ್ಥೆ ಮಾಡಲು ಬಳಸುವುದು.
6. ಗ್ರಾಮ ಪಂಚಾಯಿತಿ ಗ್ರಂಥಾಲಯದ ವಿದ್ಯುತ್ ರಿಪೇರಿಗಾಗಿ ಬಳಸುವುದು.
7. ಸಾರ್ವಜನಿಕ ಗ್ರಂಥಾಲಯದ ಮಾರ್ಗಸೂಚಿಯಲ್ಲಿ ನಿಗಧಿಪಡಿಸಿರುವ ದರಗಳಲ್ಲಿ ಮಕ್ಕಳಿಗೆ ಸಂಬಂಧಿಸಿದ ಪ್ರಕಟಣೆಗಳನ್ನು ಖರೀದಿಸಿ ಮಕ್ಕಳಿಗೆ ಓದಲು ಪ್ರತ್ಯೇಕ ವಿಭಾಗವನ್ನು ಗ್ರಾಮ ಪಂಚಾಯಿತಿ ಗ್ರಂಥಾಲಯದಲ್ಲಿ ಅಭಿವೃದ್ಧಿ ಪಡಿಸಲು ಬಳಸುವುದು.
8. ಗ್ರಾಮ ಪಂಚಾಯಿತಿ ಗ್ರಂಥಾಲಯಗಳಲ್ಲಿ ಸೂಚನಾ ಫಲಕಗಳನ್ನು ವ್ಯವಸ್ಥೆ ಮಾಡಲು ಬಳಸುವುದು.

ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿ ಗ್ರಂಥಾಲಯಗಳಲ್ಲಿ ಈ ಕೆಳಗಿನ ಪುಸ್ತಕಗಳು/ಪತ್ರಿಕೆಗಳು/ಪೋಸ್ಟರ್‌ಗಳನ್ನು ಕಡ್ಡಾಯವಾಗಿ ಇರುವುದು.

ಇಂಗ್ಲೀಷ್ ಶಬ್ದಕೋಶ (English Dictionary)

1. ಕನ್ನಡ ಶಬ್ದಕೋಶ (Kannada Dictionary)
2. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993
3. ಭಾರತದ ಸಂವಿಧಾನ (Indian Constitution)
4. ಭಾರತದ ಸಂವಿಧಾನದ ಮುನ್ನುಡಿಯ ಪೋಸ್ಟರ್
5. ಆಯಾ ವರ್ಷದಲ್ಲಿ ನಡೆಯುವ ಸ್ಪರ್ಧಾತ್ಮಕ ಪರೀಕ್ಷೆಗಳ ವಾರ್ಷಿಕ ವೇಳಾ ಪಟ್ಟಿ ಮತ್ತು ವಿವರಗಳು.
6. ಮಕ್ಕಳಿಗೆ ಸಂಬಂಧಿಸಿದ ವಾರ/ಮಾಸಿಕ/ವಾರ್ಷಿಕ ಪತ್ರಿಕೆಗಳು
7. ಅಟ್ಲಾಸ್ (Atlas)
8. ವಿಶ್ವ ಭೂಪಟ(World Map),ಭಾರತದ ಭೂಪಟ(Indian Map),ಕರ್ನಾಟಕ ರಾಜ್ಯ ಭೂಪಟ(Karnataka State Map)
9. ಮಕ್ಕಳ ಹಕ್ಕುಗಳ ಪೋಸ್ಟರ್.
10. Newspapers and periodicals including one magazine for children and one for women.

(ಉಮಾ ಮಹಾದೇವನ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂಚಾಯತ್ ರಾಜ್),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಇವರಿಗೆ,**

1. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಉಪಕಾರ್ಯದರ್ಶಿಗಳು.
3. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯಿತಿಯಗಳಕಾರ್ಯನಿರ್ವಾಹಕ ಅಧಿಕಾರಿಗಳಿಗೆ(ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರ ಮುಖಾಂತರ).

4. ಎಲ್ಲಾ ಗ್ರಾಮ ಪಂಚಾಯಿತಿಗಳ ಅಧ್ಯಕ್ಷರು/ಆಡಳಿತಾಧಿಕಾರಿಗಳು/ಪಂಚಾಯಿತಿ ಅಭಿವೃದ್ಧಿಅಧಿಕಾರಿಗಳು(ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ)

<u>ಪ್ರತಿಯನ್ನು ಮಾಹಿತಿಗಾಗಿ/ಸೂಕ್ತಕ್ರಮಕ್ಕಾಗಿ ಕಳುಹಿಸಿದೆ.</u>

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂಚಾಯತ್ ರಾಜ್) ರವರ ಆಪ್ತ ಕಾರ್ಯದರ್ಶಿ.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಶಿಕ್ಷಣ ಇಲಾಖೆ(ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
5. ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ ರವರ ಆಪ್ತ ಸಹಾಯಕರು.
6. ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್ ಸೈಟ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
7. ಶಾಖಾ/ರಕ್ಷಾ ಕಡತ/ಹೆಚ್ಚುವರಿ ಪ್ರತಿ.